ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಬೀದರ್ ಜಿಲ್ಲೆಯ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಗಳ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

03 (59) ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೀದರ್ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಲ್ಲದೆ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಲ್ಪಸಂಖ್ಯಾತರ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಬೀದರ್ ಜಿಲ್ಲೆಗೆ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಅನುದಾನ ಎಷ್ಟು; ಇದರಲ್ಲಿ ಉಳಿದಿರುವ ಅನುದಾನ ಎಷ್ಟು; ಮತ್ತು ಬಾಕಿ ಉಳಿಯಲು ಕಾರಣವೇನು; ಉಳಿದ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು;

(ಇ) 2016-17, 2017-18, 2018-19 ಮತ್ತು 2019-20ರ ವರೆಗೆ ಬೀದರ್ ಜಿಲ್ಲೆಯ ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆಯಲ್ಲಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆಯಲ್ಲಿ ಹಮ್ಮಿಕೊಂಡಿರುವ ಎಲ್ಲಾ ಯೋಜನೆಗಳಿಗೆ ಈ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)